# OCTOBER 23, 2026
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ಕರ್ನಾಟಕ ವಿಧಾನ ಪರಿ ’ತ್‌ನ** ನಾಲ್ಕು ಸ್ಥಾನಗಳಿಗೆ ಇಂದು ಚುನಾವಣೆ: ಇದೇ 27 ರಂದು ಮತ ಎಣಿಕೆ.

- **ರಾಜ್ಯದ ಬರ ಪರಿಸ್ಥಿತಿ:** ಕೇಂದ್ರ ಸರ್ಕಾರದಿಂದ ಪರಿಹಾರಕ್ಕೆ ಆಗ್ರಹಿಸಲು ದೆಹಲಿಗೆ ಸರ್ವಪಕ್ಷ ನಿಯೋಗ: ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಮಾಹಿತಿ.

- **ಮೈಸೂರು ದಸರಾ** ಮಹೋತ್ಸವದ ಜಂಬೂಸವಾರಿ ಯಶಸ್ವಿಗೊಳಿಸಿದ ಗಜಪಡೆಗಳಿಗೆ ಅರಮನೆ ಆವರಣದಲ್ಲಿ ನಿನ್ನೆ ಭಾವಪೂರ್ಣ ಬೀಳ್ಕೊಡುಗೆ.

- **ಬೆಳಗಾವಿ** ಚಳಿಗಾಲ ಅಧಿವೇಶನ ಯಶಸ್ಸಿಗೆ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಲು ಅಧಿಕಾರಿಗಳಿಗೆ ಬೆಳಗಾವಿ ಜಿಲ್ಲಾಧಿಕಾರಿ ಸೂಚನೆ.

**ಈಗ ವಾರ್ತೆಗಳ ವಿವರ**

*******

**ಕರ್ನಾಟಕ ವಿಧಾನ ಪರಿ ’ತ್ತಿನ** ಎರಡು ಪದವೀಧರ ಹಾಗೂ ಎರಡು ಶಿಕ್ಷಕರ ಕ್ಷೇತ್ರ ಸೇರಿ ನಾಲ್ಕು ಸ್ಥಾನಗಳಿಗೆ ಇಂದು ಮತದಾನ ನಡೆಯಲಿದ್ದು, ಇದೇ 27 ರಂದು ಮತ ಎಣಿಕೆ ನಡೆಯಲಿದೆ. ಆಗ್ನೇಯ ಪದವೀಧರ ಕ್ಷೇತ್ರ, ಪಶ್ಚಿಮ ಪದವೀಧರ ಕ್ಷೇತ್ರ ಮತ್ತು ಈಶಾನ್ಯ ಶಿಕ್ಷಕರ ಕ್ಷೇತ್ರ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದೆ. ವಿಧಾನಪರಿಷತ್ತಿನ ಹಾಲಿ ಸದಸ್ಯರಾದ ಚಿದಾನಂದ ಎಂ ಗೌಡ, ಎಸ್.ವಿ ಸಂಕನೂರ, ಶಶೀಲ ನಮೋಶಿ ಮತ್ತು ಪುಟ್ಟಣ್ಣ ಅವರ ಸದಸ್ಯತ್ವ ಅವಧಿ ನವೆಂಬರ್ 11 ರಂದು ಮುಕ್ತಾಯವಾಗಲಿದೆ. ಇಂದು ಬೆಳಗ್ಗೆ 8 ರಿಂದ ಸಂಜೆ 4 ರವರೆಗೆ ನಡೆಯಲಿರುವ ಮತದಾನದಲ್ಲಿ ಮತದಾರರು ಅಭ್ಯರ್ಥಿಗಳ ಭವಿ ’್ಯ ನಿರ್ಧರಿಸಲಿದ್ದು, ಈ ನಾಲ್ಕೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ನಡುವೆ ನೇರ ಸ್ಪರ್ಧೆ ಏರ್ಪಟ್ಟಿದೆ. ಮತದಾನದಲ್ಲಿ ಪಾಲ್ಗೊಳ್ಳಲು ಅನುಕೂಲವಾಗುವಂತೆ ಅರ್ಹ ಮತದಾರರಿಗೆ ಇಂದು ವಿಶೇ ’ ಸಾಂದರ್ಭಿಕ ರಜೆ ಘೋಷಿಸಲಾಗಿದೆ.

*******

**ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆಗಳ** ಮಾಲೀಕರ ಜೊತೆಗೆ, ಇದೇ 26 ರಂದು ಬೆಳಗಾವಿಯಲ್ಲಿ ಸಭೆ ನಡೆಸುವುದಾಗಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ. ದೆಹಲಿ ಪ್ರವಾಸಕ್ಕೂ ಮುನ್ನ, ನಿನ್ನೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಕಾರಣಾಂತರಗಳಿಂದ ಸಭೆಯಲ್ಲಿ ಭಾಗವಹಿಸುತ್ತಿಲ್ಲ ಎಂದು ಸ್ಪ ಷ್ಟಪಡಿಸಿದರು. ತಮ್ಮ ದೆಹಲಿ ಭೇಟಿ ಸಂದರ್ಭದಲ್ಲಿ ವಿವಿಧ ಸಚಿವಾಲಯಗಳ ಸಚಿವರನ್ನು ಭೇಟಿ ಮಾಡಿ, ರಾಜ್ಯದ ಅಭಿವೃದ್ಧಿ ವಿಚಾರವಾಗಿ ಚರ್ಚೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

*******

**ಬರದಿಂದ ಸಂಕ ಷ್ಟಕ್ಕೆ ಸಿಲುಕಿರುವ** ರಾಜ್ಯದ ಜನರಿಗೆ ಕೇಂದ್ರ ಸರ್ಕಾರದಿಂದ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕರೆದೊಯ್ಯಲು ನಿರ್ಧರಿಸಲಾಗಿದೆ ಎಂದು ಕಂದಾಯ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ, ಕೇಂದ್ರ ಗೃಹ ಸಚಿವರು ಹಾಗೂ ಕೇಂದ್ರ ಕೃಷಿ ಸಚಿವರ ಭೇಟಿಗೆ ಮೊದಲು ಸಮಯಾವಕಾಶ ಪಡೆಯಬೇಕಾಗಿದ್ದು, ಭೇಟಿಗೆ ಅವಕಾಶ ದೊರೆತ ನಂತರವೇ ಸರ್ವಪಕ್ಷ ನಿಯೋಗ ಕರೆದೊಯ್ಯಲು ದಿನಾಂಕ ನಿಗದಿಪಡಿಸಲಾಗುವುದು ಎಂದರು. ರಾಜ್ಯದಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯಿಂದ ಸುಮಾರು 62 ಸಾವಿರ ಕೋಟಿ ನ ಷ್ಟವಾಗಿದ್ದು, ರಾಜ್ಯದ ಹಿತಾಸಕ್ತಿ ಗಮನದಲ್ಲಿಟ್ಟುಕೊಂಡು, ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ವಿಪಕ್ಷಗಳು ಸಹಕರಿಸಬೇಕು ಎಂದು ಡಾ.ಜಿ.ಪರಮೇಶ್ವರ ಮನವಿ ಮಾಡಿದರು.

*******

**ಮಂಡ್ಯ ಜಿಲ್ಲೆಯಲ್ಲಿ ಆಟೋಮೋಟಿವ್ ರಿಸರ್ಚ್** ಅಸೋಸಿಯೇ ನ್ ಆಫ್ ಇಂಡಿಯಾ–ಎ.ಆರ್.ಎ.ಐ. ಸಂಸ್ಥೆ ನಿರ್ಮಾಣ, ಮೂಲಸೌಕರ್ಯ ಉಪಕರಣಗಳ ಪರೀಕ್ಷಾ ಕೇಂದ್ರ–ಸಿ.ಐ.ಇ. ಹಾಗೂ ಎಲೆಕ್ಟ್ರಿಕ್ ವಾಹನ ಪರೀಕ್ಷಾ ಕೇಂದ್ರ–ಇ.ವಿ. ಸ್ಥಾಪನೆಗೆ ಭೂಮಿ ಮಂಜೂರು ಮಾಡುವಲ್ಲಿ ವಿಳಂಬವಾಗುತ್ತಿದೆ ಎಂದು, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಗೆ ಪತ್ರ ಬರೆದಿರುವ ಅವರು, ಕಳೆದ ಹತ್ತು ತಿಂಗಳಿಂದ ರಾಜ್ಯ ಸರ್ಕಾರ ಹಾಗೂ ಮಂಡ್ಯ ಜಿಲ್ಲಾಡಳಿತದಿಂದ, ಭೂಮಿ ಮಂಜೂರಾತಿ ಬಾಕಿ ಉಳಿದಿದೆ. ಕೂಡಲೇ ಭೂಮಿ ಮಂಜೂರು ಮಾಡುವಂತೆ ಮನವಿ ಮಾಡಿದ್ದಾರೆ. 2026–27 ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಮಂಡ್ಯದಲ್ಲಿ ಎ.ಆರ್.ಎ.ಐ. ಪರೀಕ್ಷಾ ಕೇಂದ್ರ ಸ್ಥಾಪನೆಗೆ, ಭೂಮಿ ಒದಗಿಸುವುದಾಗಿ ಘೋಷಿಸಲಾಗಿತ್ತು. ಈ ಕೇಂದ್ರಗಳಿಂದ ವಾಹನ ಸಂಶೋಧನೆ, ವಿದ್ಯುತ್ ವಾಹನ ತಂತ್ರಜ್ಞಾನ, ಸ್ಥಳೀಯ ಕೈಗಾರಿಕೆಗಳ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಗೆ ಉತ್ತೇಜನ ದೊರೆಯಲಿದೆ ರಾಜಕೀಯ ಭೇದ ಮರೆತು, ಯೋಜನೆಗೆ ಅಗತ್ಯ ಭೂಮಿಯನ್ನು ಶೀಘ್ರ ಮಂಜೂರು ಮಾಡುವಂತೆ ಕುಮಾರಸ್ವಾಮಿ, ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.

*******

**ಪ್ರಧಾನ ಮಂತ್ರಿ ನರೇಂದ್ರ ಮೋದಿ** ಅವರ ನಾಯಕತ್ವದಲ್ಲಿ ಭಾರತ, ಕೃತಕ ಬುದ್ಧಿಮತ್ತೆ ಮೂಲಸೌಕರ್ಯವನ್ನು ವಿಸ್ತರಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. 'ಎಐ ಯುಗಕ್ಕೆ ಭಾರತದ ಪದವೀಧರರನ್ನು ಸಜ್ಜುಗೊಳಿಸುವುದು' ಎಂಬ ಶೀರ್ಷಿಕೆಯ ತಮ್ಮ ಅಂಕಣದಲ್ಲಿ ಈ ವಿಷಯ ಪ್ರಸ್ತಾಪಿಸಿರುವ ಅವರು, ಒಂದು ಕೋಟಿ ಯುವಜನರಿಗೆ ಎಐ ತರಬೇತಿ ನೀಡುವ ಜೊತೆಗೆ, ನಾಲ್ಕು ಎಐ ಶ್ರೇ ್ಠತಾ ಕೇಂದ್ರಗಳ ಮೂಲಕ, ಸಂಶೋಧನೆಗೆ ಉತ್ತೇಜನ ನೀಡುತ್ತಿದೆ ಎಂದಿದ್ದಾರೆ. ಕೃತಕ ಬುದ್ಧಿಮತ್ತೆಯ ಬೆಳವಣಿಗೆಗೆ ಅನುಗುಣವಾಗಿ ಭಾರತದ ಉನ್ನತ ಶಿಕ್ಷಣ ವ್ಯವಸ್ಥೆಯಲ್ಲಿ, ಬದಲಾವಣೆ ಅಗತ್ಯವಿದೆ. ಕೇವಲ ಕಂಠಪಾಠಕ್ಕೆ ಸೀಮಿತವಾಗಿರುವ ಶಿಕ್ಷಣ ಪದ್ಧತಿಯಿಂದ ಹೊರಬಂದು, ವಿಮರ್ಶಾತ್ಮಕ ಚಿಂತನೆ, ಸಮಸ್ಯೆಗಳನ್ನು ಪರಿಹರಿಸುವ ಸಾಮರ್ಥ್ಯ ಹಾಗೂ ಪ್ರಾಯೋಗಿಕ ಕೌಶಲ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಚಿವರು ಅಭಿಪ್ರಾಯಪಟ್ಟಿದ್ದಾರೆ.

*******

**ವಿಶ್ವವಿಖ್ಯಾತ ನಾಡಹಬ್ಬ** ಮೈಸೂರು ದಸರಾ ಮಹೋತ್ಸವದ ಜಂಬೂಸವಾರಿಯನ್ನು ಯಶಸ್ವಿಗೊಳಿಸಿದ ಗಜಪಡೆಗಳಿಗೆ ಮೈಸೂರಿನ ಅರಮನೆ ಆವರಣದಲ್ಲಿ ನಿನ್ನೆ ವಿಶೇ ’ ಪೂಜೆ ಸಲ್ಲಿಸಿ, ಶಿಬಿರಕ್ಕೆ ಬೀಳ್ಕೊಡಲಾಯಿತು. ಕಳೆದ ಎರಡು ತಿಂಗಳಿನಿಂದ ಕಾಡಿನಿಂದ ನಾಡಿಗೆ ಆಗಮಿಸಿದ್ದ ಆನೆಗಳು, ಜಂಬೂಸವಾರಿ ತಾಲೀಮು ನಡೆಸಿ, ವಿಜಯದಶಮಿಯಂದು ನಡೆದ ಮೆರವಣಿಗೆಯಲ್ಲಿ ಯಾವುದೇ ತೊಂದರೆಯಾಗದಂತೆ ಶಿಸ್ತಿನಿಂದ ತಮ್ಮ ಕರ್ತವ್ಯ ನಿರ್ವಹಿಸಿದ್ದವು. ಈ ಬಾರಿ ಮೊದಲ ಬಾರಿಗೆ ಚಿನ್ನದ ಅಂಬಾರಿ ಹೊತ್ತ ಪ್ರಶಾಂತ, ನಿಶಾನೆಯಾಗಿ ಕಾರ್ಯನಿರ್ವಹಿಸಿದ ನಿವೃತ್ತ ಅಂಬಾರಿ ಆನೆ ಅಭಿಮನ್ಯು, ನೌಪತ್ ಆನೆಯಾಗಿ ಕಾರ್ಯನಿರ್ವಹಿಸಿದ ಗೋಪಿ ಹಾಗೂ ಏಕಲವ್ಯ, ಮಹೇಂದ್ರ, ಧನಂಜಯ, ಶ್ರೀರಾಮ, ಶ್ರೀಕಂಠ, ಸುಗ್ರೀವ, ಲಕ್ಷ್ಮಿ ಮತ್ತು ರೂಪಾ ಆನೆಗಳಿಗೆ ಸಾಂಪ್ರದಾಯಿಕ ಪೂಜೆ ಸಲ್ಲಿಸಿ ಬೀಳ್ಕೊಡಲಾಯಿತು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–32 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಪ್ರಸಕ್ತ ಸಾಲಿನಲ್ಲಿ ನಡೆಯಲಿರುವ** ವಿಧಾನಮಂಡಲದ ಚಳಿಗಾಲ ಅಧಿವೇಶನವನ್ನು ಯಶಸ್ವಿಗೊಳಿಸಲು ಎಲ್ಲ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವ ಮೂಲಕ ಅಧಿವೇಶನವನ್ನು ಅಚ್ಚುಕಟ್ಟಾಗಿ ನಡೆಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋ ’ನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಚಳಿಗಾಲ ಅಧಿವೇಶನ–2026 ರ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು, ಸಚಿವರುಗಳಿಗೆ ಶಿ ್ಟಾಚಾರದಲ್ಲಿ ಯಾವುದೇ ಲೋಪವಾಗದಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿಗಾವಹಿಸಬೇಕು ಎಂದರು. ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದಲ್ಲಿ ಅಂತರ್ಜಾಲ ಸಂಪರ್ಕದಲ್ಲಿ ಯಾವುದೇ ಅಡೆತಡೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಗಣ್ಯರು, ಅಧಿಕಾರಿಗಳು, ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಅಧಿವೇಶನಕ್ಕೆ ಆಗಮಿಸುವ ಸಿಬ್ಬಂದಿ ವಸತಿ ಪ್ರದೇಶಗಳಲ್ಲಿ ತುರ್ತು ವೈದ್ಯಕೀಯ ತಂಡಗಳನ್ನು ನಿಯೋಜಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

*******

**ಚಿತ್ರದುರ್ಗದ ಶ್ರೀ ಜಗದ್ಗುರು** ಮುರುಘರಾಜೇಂದ್ರ ಬೃಹನ್ಮಠದಲ್ಲಿ ನಡೆಯುತ್ತಿರುವ ಶರಣ ಸಂಸ್ಕೃತಿ ಉತ್ಸವದ ಹಿನ್ನೆಲೆ, ಮಠದ ರಾಜಾಂಗಣದಲ್ಲಿ 'ಶೂನ್ಯ ಪೀಠಾರೋಹಣ' ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಅಲ್ಲಮ ಪ್ರಭುದೇವರು ಸ್ಥಾಪಿಸಿದ ಶೂನ್ಯ ಪೀಠಾರೋಹಣದ ಅಂಗವಾಗಿ, ಕರ್ತೃ ಮುರುಘೇಶ್ವರರ ಭಾವಚಿತ್ರವನ್ನು ಪೀಠದ ಮೇಲೆ ಇರಿಸಿ ಭಕ್ತರು ಭಕ್ತಿಭಾವದಿಂದ ಪೀಠಾರೋಹಣ ನೆರವೇರಿಸಿದರು. ಉತ್ಸವದ ಭಾಗವಾಗಿ ವಚನ ಸಾಹಿತ್ಯದ ಅಪರೂಪದ ತಾಳೆಗರಿ ಹಾಗೂ ಹಸ್ತಪ್ರತಿಗಳನ್ನೊಳಗೊಂಡ 'ಅಡ್ಡ ಪಲ್ಲಕ್ಕಿ ಉತ್ಸವ' ಮಠದ ಆವರಣದಲ್ಲಿ ಸಕಲ ಮಂಗಳ ವಾದ್ಯಗಳು ಮತ್ತು ಸಾಂಸ್ಕೃತಿಕ ಕಲಾ ತಂಡಗಳ ವೈಭವದೊಂದಿಗೆ ಶ್ರದ್ಧಾ-ಭಕ್ತಿಯಿಂದ ಜರುಗಿತು.

*******

**ಅಕ್ರಮವಾಗಿ ಪಡಿತರ** ಅಕ್ಕಿ ಸಂಗ್ರಹಣೆ, ಸಾಗಾಣೆ ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಆಹಾರ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, 2025-26 ಹಾಗೂ 2026-27ನೇ ಸಾಲಿನಲ್ಲಿ ಒಟ್ಟು 77 ಪ್ರಕರಣ ದಾಖಲಿಸಿ, 3,045.44 ಕ್ವಿಂಟಾಲ್ ಅಕ್ಕಿ ಮತ್ತು 53 ವಾಹನಗಳನ್ನು ಜಪ್ತಿ ಮಾಡಲಾಗಿದೆ. ಈ ಪ್ರಕರಣಗಳಲ್ಲಿ 104 ಆರೋಪಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

*******

**ಕರ್ನಾಟಕ ಇತಿಹಾಸ ಅಕಾದೆಮಿ ಕೊಡಮಾಡುವ** ಪ್ರತಿಷ್ಠಿತ 'ಇತಿಹಾಸ ಸಂಸ್ಕೃತಿ ಶ್ರೀ' ಪ್ರಶಸ್ತಿಗೆ ಧಾರವಾಡದ ಹಿರಿಯ ಸಂಸೋಧಕ ಹಾಗೂ ಶಾಸನತಜ್ಞ, ಡಾ.ಜೆ.ಎಂ. ನಾಗಯ್ಯ ಭಾಜನರಾಗಿದ್ದಾರೆ. ಬೀದರ ಜಿಲ್ಲೆ ಬಾಲ್ಕಿ ಹಿರೇಮಠದ ಶ್ರೀಚೆನ್ನಬಸವೇಶ್ವರ ಗುರುಕುಲ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಇಂದಿನಿಂದ 25 ರವರೆಗೆ ಜರುಗಲಿರುವ ಕರ್ನಾಟಕ ಇತಿಹಾಸ ಅಕಾದೆಮಿಯ 40 ನೇ ರಾಷ್ಟ್ರೀಯ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ. ಪ್ರಶಸ್ತಿ 50 ಸಾವಿರ ನಗದು, ಸ್ಮರಣಿಕೆ ಒಳಗೊಂಡಿದೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಕರ್ನಾಟಕ ವಿಧಾನ ಪರಿ ್ತ್‌ನ** ನಾಲ್ಕು ಸ್ಥಾನಗಳಿಗೆ ಇಂದು ಚುನಾವಣೆ: ಇದೇ 27 ರಂದು ಮತ ಎಣಿಕೆ.

**ರಾಜ್ಯದ ಬರ ಪರಿಸ್ಥಿತಿ:** ಕೇಂದ್ರ ಸರ್ಕಾರದಿಂದ ಪರಿಹಾರಕ್ಕೆ ಆಗ್ರಹಿಸಲು ದೆಹಲಿಗೆ ಸರ್ವಪಕ್ಷ ನಿಯೋಗ: ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಮಾಹಿತಿ.

**ಮೈಸೂರು ದಸರಾ** ಮಹೋತ್ಸವದ ಜಂಬೂಸವಾರಿ ಯಶಸ್ವಿಗೊಳಿಸಿದ ಗಜಪಡೆಗಳಿಗೆ ಅರಮನೆ ಆವರಣದಲ್ಲಿ ನಿನ್ನೆ ಭಾವಪೂರ್ಣ ಬೀಳ್ಕೊಡುಗೆ.

**ಬೆಳಗಾವಿ** ಚಳಿಗಾಲ ಅಧಿವೇಶನ ಯಶಸ್ಸಿಗೆ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಲು ಅಧಿಕಾರಿಗಳಿಗೆ ಬೆಳಗಾವಿ ಜಿಲ್ಲಾಧಿಕಾರಿ ಸೂಚನೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

************